## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 407
ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ
(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 10.12.2025
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 95ರ ತಿದ್ದುಪಡಿ ಅಧಿಸೂಚನೆಯನ್ನು ಇದುವರೆವಿಗೂ ಜಾರಿಗೆ ತರದಿರಲು ಕಾರಣಗಳೇನು; | ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಗಳಿಗೆ ಪರಿವರ್ತಿಸುವ ಪ್ರಕ್ರಿಯೆಯನ್ನು ಸರಳೀಕರಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ರ ವಿವಿಧ ಉಪ-ಕಲಂಗಳಿಗೆ ತಿದ್ದುಪಡಿಯನ್ನು ಮಾಡಲಾಗಿದೆ. ಅದನ್ನು ಜಾರಿಗೆ ತರಲು ಈಗಾಗಲೇ ವಿವಿಧ ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಿ, ಅಭಿಪ್ರಾಯ ಹಾಗೂ ಸಲಹೆಯನ್ನು ಪಡೆದು ಸೂಕ್ತ ನಿಯಮಗಳನ್ನು ರೂಪಿಸಲು ಕ್ರಮಕೈಗೊಳ್ಳಲಾಗುತ್ತಿದೆ. |
| ಆ) | ಕಳೆದ ಅಧಿವೇಶನದಲ್ಲಿ ಈ ಅಧಿಸೂಚನೆಯನ್ನು ಗೊತ್ತುಪಡಿಸಿದ ದಿನಾಂಕದಿಂದ ಜಾರಿಗೆ ಬರುವುದು ಎಂದು ತಿಳಿಸಲಾಗಿತ್ತು; ಆದರೆ ಇದುವರೆವಿಗೂ ಈ ಅಧಿಸೂಚನೆಯನ್ನು ಜಾರಿಗೆ ತರದಿರುವುದರಿಂದ ನಗರ ಪ್ರದೇಶದ ಜನತೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ, ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಗಳಿಗೆ ಪರಿವರ್ತಿಸಲು ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ. 156 ಎಲ್.ಜಿ.ಪಿ. 2020, ದಿನಾಂಕ: 21.09.2020 ರನ್ವಯ ಕ್ರಮವಹಿಸಲಾಗುತ್ತಿರುವುದರಿಂದ ಜನತೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಇ) | ಕರ್ನಾಟಕ ಭೂ ಕಂದಾಯ ಕಾಯ್ದೆ 1964 ಕಲಂ 95ರ ತಿದ್ದುಪಡಿ ಅಧಿಸೂಚನೆಯನ್ನು ಸಾರ್ವಜನಿಕರಿಗೆ ಯಾವ ದಿನಾಂಕದಿಂದ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗುವುದು? | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ಕ್ಕೆ ಮಾಡಲಾದ ತಿದ್ದುಪಡಿಗಳಿಗೆ ಅನುಗುಣವಾಗಿ ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ವಿವಿಧ ನಿಯಮಗಳಿಗೆ ತಿದ್ದುಪಡಿ ಮಾಡಲು ಸರ್ಕಾರವು ದಿನಾಂಕ: 17.09.2025 ರಂದು ಕರಡು ನಿಯಮಗಳ ಅಧಿಸೂಚನೆಯನ್ನು ಹೊರಡಿಸಿದ್ದು, ಶೀಘ್ರದಲ್ಲಿ ಅಂತಿಮ ಅಧಿಸೂಚನೆಯನ್ನು ಹೊರಡಿಸಲಾಗುವುದು. |

ಸಂಖ್ಯೆ: ಆರ್‌ಡಿ 175 ಎಲ್‌ಜಿಕ್ಯೂ 2025

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು